KA / BG - GPO/ 2515 /WPP-47/ 2009 - 2011

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ಪತ್ರಿಕೆ

| ಭಾಗ – **IV-A** | ಬೆಂಗಳೂರು, ಗುರುವಾರ, ಮಾರ್ಚ್ ೩೧, ೨೦೧೧ (ಚೈತ್ರ ೧೦, ಶಕ ವರ್ಷ ೧೯೩೩) | ನಂ. ೩೮೪ |
|---|---|---|

**ಕಂದಾಯ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಕಂಇ 73 ಮುನೋಮು 2011, ಬೆಂಗಳೂರು, ದಿನಾಂಕ: 29.03.2011**

ಕರ್ನಾಟಕ ಸರ್ಕಾರವು ಕರ್ನಾಟಕ ಮುದ್ರಾಂಕ ಕಾಯ್ದೆ 1957ರ (1957 ರ ಕರ್ನಾಟಕ ಕಾಯ್ದೆ 34) ಕಲಂ 9(1)(ಎ)ರನ್ವಯ ಹಾಗೂ ನೋಂದಣಿ ಕಾಯ್ದೆ 1908ರ (1908ರ ಕೇಂದ್ರೀಯ ಕಾಯ್ದೆ 16) ಕಲಂ 78ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಸಾರ್ವಜನಿಕ ಹಿತದೃಷ್ಟಿಯಿಂದ ಕೈಗಾರಿಕೆ ಸ್ಥಾಪನೆ, ಕೈಗಾರಿಕೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು, ಕೈಗಾರಿಕಾ ವಿವಿಧೋದ್ದೇಶ ಯೋಜನೆಗಳ ಹಾಗೂ ಇತರೆ ಸಾರ್ವಜನಿಕ ಉದ್ದೇಶಕ್ಕಾಗಿ ಸರ್ಕಾರ ಹಾಗೂ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಸಂಸ್ಥೆಗಳು,

i. ರೈತರ ಜಮೀನನ್ನು ಭೂ ಸ್ವಾಧೀನ ಪಡಿಸಿಕೊಂಡಾಗ, ಭೂ ಪರಿಹಾರದ ಹಣದ ಬದಲಾಗಿ, ಅಭಿವೃದ್ಧಿ ಮಾಡಿದ ಜಮೀನನ್ನು ಪರಿಹಾರವಾಗಿ ನೀಡುವ ಸಂದರ್ಭದಲ್ಲಿ,

ii. ರೈತರಿಂದ ಜಮೀನನ್ನು ಸ್ವಾಧೀನ ಪಡಿಸಿಕೊಂಡಾಗ ನೀಡಿದ ಪರಿಹಾರ ಮೊತ್ತಕ್ಕೆ ಮೀರದ ಮೊಬಲಗಿನಲ್ಲಿ ರೈತರು ಜಮೀನನ್ನು ಖರೀದಿಸಿದ ಸಂದರ್ಭದಲ್ಲಿ,

ಬರೆದುಕೊಡುವ ದಸ್ತಾವೇಜುಗಳಿಗೆ ವಿಧಿಸಲಾಗುವ ಮುದ್ರಾಂಕ ಶುಲ್ಕ ಹಾಗೂ ನೋಂದಣಿ ಶುಲ್ಕಗಳಲ್ಲಿ ಸಂಪೂರ್ಣ ವಿನಾಯಿತಿ ನೀಡಿ ಆದೇಶಿಸಿದೆ.

ರೈತರಿಂದ ಭೂ ಸ್ವಾಧೀನ ಪಡಿಸಿಕೊಂಡ ವಿವರಗಳು ಹಾಗೂ ಅವರಿಗೆ ನೀಡಿದ ಪರಿಹಾರದ ವಿವರಗಳನ್ನು ಸಂಬಂಧಿಸಿದ ಸಂಸ್ಥೆಗಳ ಸಕ್ಷಮ ಪ್ರಾಧಿಕಾರಿಗಳು ಅಥವಾ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ನೀಡಿದ ಪ್ರಮಾಣಪತ್ರದ ಆಧಾರದ ಮೇಲೆ ಮಾತ್ರ ಮೇಲ್ಕಂಡ ವಿನಾಯಿತಿ ನೀಡುವುದು.

ಈ ಆದೇಶವನ್ನು ದಿನಾಂಕ: 01–04–2011 ರಿಂದ ಜಾರಿಗೆ ತರಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಟಿ.ಕೆ. ರಾಮಚಂದ್ರ**
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ನೋಂದಣಿ ಮತ್ತು ಮುದ್ರಾಂಕ)